ಬಾಗೇಪಲ್ಲಿ ಮತ್ತು ಗುಡಿಬಂಡೆ ತಾಲ್ಲೂಕುಗಳಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಮಾಡುವುದು.

247 - ಶ್ರೀ ಜಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಾಗೇಪಲ್ಲಿ ಮತ್ತು ಗುಡಿಬಂಡೆ ತಾಲ್ಲೂಕುಗಳಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಗಡಿ ಪ್ರದೇಶಗಳಲ್ಲಿರುವ ಈ ಹಿಂದುಳಿದ ಪ್ರದೇಶಗಳ ಬಡ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಈ ಎರಡೂ ತಾಲ್ಲೂಕುಗಳಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭ ಮಾಡಲು ಸರ್ಕಾರ ತ್ವರಿತ ಕ್ರಮ ಕೈಗೊಳ್ಳುವುದೇ;

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು

ಆ) ಹಣದ ಲಭ್ಯತೆ ಅನುಸರಿಸಿ 1996-97ರ ಸಾಲಿನಲ್ಲಿ ಇದನ್ನು ಪರಿಗಣಿಸಲಾಗುವುದು.

ಸೋಮವಾರಪೇಟೆ ತಾ. ಸೂಲಗಬ್ಬಿ ಗ್ರಾಮದಲ್ಲಿ ಪ್ರೌಢಶಾಲೆ ಕಟ್ಟಡ ನಿರ್ಮಾಣ

408 - ಶ್ರೀ ಅಪ್ಪಚ್ಚು ರಂಜನ್ (ಸೋಮವಾರಪೇಟೆ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಸೋಮವಾರಪೇಟೆ ತಾಲ್ಲೂಕಿನ ಸುಲದಬ್ಬಿ ಗ್ರಾಮದಲ್ಲಿ ಸರ್ಕಾರಿ ಪ್ರೌಢ ಶಾಲೆಯ ಕಟ್ಟಡ ನಿರ್ಮಾಣ ಮಾಡಲು ಕೊಡಗು ಜಿಲ್ಲಾ ಪಂಚಾಯತ್ ಹಣ ಬಿಡುಗಡೆ ಮಾಡಿರುವುದು ನಿಜವಲ್ಲವೆ ಹಾಗಿದ್ದಲ್ಲಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ.

ಆ) ಈ ಕಟ್ಟಡ ನಿರ್ಮಾಣ ಮಾಡಲು ಸದರಿ ಗ್ರಾಮಸ್ಥರು ನಿವೇಶನ ನೀಡಿದ್ದು ಶಿಕ್ಷಣ ಇಲಾಖೆಯ ಅಧಿಕಾರಿಗಳು ನಿವೇಶನ ಶಾಲೆಗೆ ಸೂಕ್ತವಾಗಿದೆ ಎಂದು ಶಿಫಾರಸ್ಸು ಮಾಡಿದ್ದರು ಕಟ್ಟಡ ನಿರ್ಮಾಣ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಈ ಕಟ್ಟಡವನ್ನು ಗ್ರಾಮಸ್ಥರು ಅಪೇಕ್ಷಿಸುವ ಸ್ಥಳದಲ್ಲಿ ಕಟ್ಟಡ ಕಟ್ಟಲು ಜಿಲ್ಲಾ ಪಂಚಾಯಿತಿಗೆ ಮುಕ್ತ ಅವಕಾಶವನ್ನು ಸರ್ಕಾರ ನೀಡುವುದೇ?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):

ಅ) ಹೌದು

1994-95ನೇ ಸಾಲಿನಲ್ಲಿ ರೂಪಾಯಿ 3.40 ಲಕ್ಷ ಹಣ ಬಿಡುಗಡೆ ಮಾಡಿದೆ.

ಆ) ಬಂದಿದೆ.

ಇ) ಎರಡು ಗ್ರಾಮಸ್ಥರಲ್ಲಿ ಭಿನ್ನಾಭಿಪ್ರಾಯವಿದ್ದು ಅವರ ಮನವೊಲಿಸಿ ಅವರು ಅಪೇಕ್ಷಿಸುವ ಸ್ಥಳದಲ್ಲಿ ಜಿಲ್ಲಾ ಪಂಚಾಯಿತಿಯಿಂದ ಕಟ್ಟಡ ನಿರ್ಮಿಸಲು ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಖಾಸಗಿ ಶಾಲೆಗಳನ್ನು ಅನುದಾನಕ್ಕೊಳಪಡಿಸುವುದು

93 - ಶ್ರೀ ಎ.ಟಿ. ರಾಮಸ್ವಾಮಿ (ಅರಕಲಗೂಡು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?